ರೀಅಸಪಾಲ್ಪ್ ಮಾಡುವುದಕ್ಕೆ ನಬಾರ್ಡ್‌ನಲ್ಲಿ ಕೊಡುವುದಿಲ್ಲ, ಇದನ್ನು ಬಿಟ್ಟು ಬೇರೆ ಯಾವುದಾದರೂ ರೀತಿಯಲ್ಲಿ ಹಣಕಾಸಿನ ವ್ಯವಸ್ಥೆಯನ್ನು ಮಾಡಿ ಮಾಡುವುದಕ್ಕೆ ಪ್ರಯತ್ನ ಮಾಡುತ್ತೇನೆ.

ಅಧ್ಯಕ್ಷರು : ಈಗ ಪ್ರಶ್ನೋತ್ತರ ವೇಳೆ ಮುಗಿಯಿತು. ಇನ್ನು ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು:

ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಂ.ಪಿ. ಪ್ರಕಾಶ್ (ಕಂದಾಯ ಸಚಿವರು): ಮಾನ್ಯ ಅಧ್ಯಕ್ಷರೆ, ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳ ೧೮೨ನೇ ಪಟ್ಟಿಯಲ್ಲಿರುವ ೨೧೨ ಪ್ರಶ್ನೆಗಳ ಪೈಕಿ ೧೭೬ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡುವ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.

ಅಧ್ಯಕ್ಷರು: ಈಗ ವಿತ್ತೀಯ ಕಾರ್ಯಕಲಾಪಗಳನ್ನು ತೆಗೆದುಕೊಳ್ಳೋಣ. ಮಾನ್ಯ ಜಯಪ್ರಕಾಶ್ ಹೆಗಡೆಯವರು ಮಾತನಾಡಬೇಕು.

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ : ಮಾನ್ಯ ಅಧ್ಯಕ್ಷರೇ, ನಾವು ನಿಲುವಳಿ ಸೂಚನೆ ಒಂದು ಕಳುಹಿಸಿದ್ದೇವೆ.

ಶ್ರೀ ಆರಗ ಜ್ಞಾನೇಂದ್ರ : ಮಾನ್ಯ ಅಧ್ಯಕ್ಷರೆ, ನಿಲುವಳಿ ಸೂಚನೆಯ ಬಗ್ಗೆ...

ಅಧ್ಯಕ್ಷರು : ನಾನು ಅದನ್ನು ನೋಡಿದ್ದೇನೆ. ಅದು ಆಡಳಿತಾತ್ಮಕವಾದ ವಿಚಾರವಾಗಿದೆ. ಅದನ್ನು ಬಜೆಟ್‌ನಲ್ಲೂ ಪ್ರಸ್ತಾಪ ಮಾಡಬಹುದು. ಅದನ್ನು ನಾನು ಗಮನ ಸೆಳೆಯುವ ಸೂಚನೆ ಎಂದು ಕನವರ್ಟ್ ಮಾಡಿ, ಅದಕ್ಕೆ ಅವಕಾಶವನ್ನು ಕೊಡುತ್ತೇವೆ. ಈಗ ವಿತ್ತೀಯ ಕಾರ್ಯಕಲಾಪವಾದ ಮೇಲೆ ಅವಕಾಶವನ್ನು ಕೊಡುತ್ತೇನೆ.

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ : ಮಾನ್ಯ ಅಧ್ಯಕ್ಷರೆ, ರಾಜ್ಯದಲ್ಲಿ ಎಲ್ಲಾ ರಸ್ತೆಗಳು ಹಾಳಾಗಿರುವಂಥದ್ದು, ನಮ್ಮೆಲ್ಲರ ಅನುಭವದಲ್ಲಿ ಇರುವಂಥಾದ್ದು, ಆದುದರಿಂದ ಇದು ಬಹಳ ಪ್ರಮುಖವಾದಂತಹ ವಿಷಯವಾಗಿದೆ.

ಅಧ್ಯಕ್ಷರು : ಆಯಿತು, ಈಗ ವಿತ್ತೀಯ ಕಾರ್ಯಕಲಾಪಗಳು ಆದ ತಕ್ಷಣ ಮಧ್ಯಾಹ್ನ ಇದನ್ನು ತೆಗೆದುಕೊಳ್ಳೋಣ.

ಶ್ರೀ ಆರಗ ಜ್ಞಾನೇಂದ್ರ : ಮಾನ್ಯ ಅಧ್ಯಕ್ಷರೇ, ಈ ಅಧಿವೇಶನ ಮುಗಿದ ಮೇಲೆ ನಾವು ಊರಿಗೆ ಹೋಗುವ ಸ್ಥಿತಿಯಲ್ಲಿ ಇಲ್ಲ ಆ ರೀತಿಯಾಗಿದೆ.